ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 535
ಸದಸ್ಯರ ಹೆಸರು : ಶ್ರೀ ಹೆಚ್. ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 05-02-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
(ಅ)	ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳನ್ನು ಹೊಸದಾಗಿ ಸೃಜಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)	ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಹೊಸದಾಗಿ ಸೃಜನೆಯಾಗಿರುವ ಗ್ರಾಮ ಪಂಚಾಯತಿಗಳ ವಿವರ ಈ ಕೆಳಕಂಡಂತಿದೆ. (ಕೆಳಗಿನ ಕೋಷ್ಟಕ 1)
(ಆ)	ಹೊಸದಾಗಿ ಗ್ರಾಮ ಪಂಚಾಯಿತಿಗಳನ್ನು ಮಾಡಲು ಇರುವ ಮಾನದಂಡಗಳೇನು; (ಸಂಪೂರ್ಣ ವಿವರ ನೀಡುವುದು)	ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ಅಧಿನಿಯಮ, 1993 ಪ್ರಕರಣ 4 ರಲ್ಲಿ ಸರ್ಕಾರದ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೊಳಪಟ್ಟು ಜಿಲ್ಲಾಧಿಕಾರಿಗಳು 5000 ಕ್ಕಿಂತ ಕಡಿಮೆ ಇಲ್ಲದ ಮತ್ತು 7000 ಕ್ಕೆ ಹೆಚ್ಚಿಗೆ ಇಲ್ಲದ ಜನಸಂಖ್ಯೆಯುಳ್ಳ ಒಂದು ಗ್ರಾಮವನ್ನು ಅಥವಾ ಗ್ರಾಮಗಳ ಗುಂಪನ್ನು ಒಳಗೊಂಡಿರುವ ಯಾವುದೇ ಪ್ರದೇಶವನ್ನು ಪಂಚಾಯತಿ ಪ್ರದೇಶವೆಂದು ಘೋಷಿಸುವುದು ಯುಕ್ತವೆಂದು ಅಭಿಪ್ರಾಯಪಟ್ಟರೆ, ಮೊದಲೆ ಪ್ರಕಟಣೆ ಹೊರಡಿಸಿದ ತರುವಾಯ ಅಂತಹ ಪ್ರದೇಶವನ್ನು ಪಂಚಾಯತಿ ಪ್ರದೇಶವೆಂದು ಘೋಷಿಸಬಹುದು ಮತ್ತು ಅದರ ಕೇಂದ್ರ ಕಾರ್ಯ ಸ್ಥಾನವನ್ನು ನಿರ್ದಿಷ್ಟಪಡಿಸಬಹುದಾಗಿದೆ.
(ಇ)	ಗ್ರಾಮ ಪಂಚಾಯಿತಿಗಳಿಗೆ ಸರ್ಕಾರದಿಂದ ಎಷ್ಟು; ಅನುದಾನವನ್ನು ಬಿಡುಗಡೆ ಮಾಡಲಾಗಿದೆ? (ವಿವರ ನೀಡುವುದು)	ಹೊಸ ಗ್ರಾಮ ಪಂಚಾಯತಿಗೆ ಬಿಡುಗಡೆಯಾದ ಅನುದಾನ ವಿವರ ಈ ಕೆಳಗಿನಂತಿದೆ. (ಕೆಳಗಿನ ಕೋಷ್ಟಕ 2)

ಕ್ರಸಂ	ಜಿಲ್ಲೆ	ತಾಲ್ಲೂಕು	ಗ್ರಾಮ ಪಂಚಾಯಿತಿ ಹೆಸರು
1	ಬೆಂಗಳೂರು ಗ್ರಾಮಾಂತರ	ನೆಲಮಂಗಲ	ಕಣೇಗೌಡನಹಳ್ಳಿ
2	ಬೆಳಗಾವಿ	ರಾಯಭಾಗ	ಮಂಟೂರು

ಕ್ರ.ಸಂ	ಗ್ರಾಮ ಪಂಚಾಯತಿ ಹೆಸರು	ಯೋಜನೆ	ವರ್ಷ	ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ)
1	ಮಂಟೂರ	14ನೇ ಹಣಕಾಸು	2018-19	11.01
			2019-20	47.37
		15ನೇ ಹಣಕಾಸು	2020-21	13.53
		MGNREGA	2018-19	0.02
			2019-20	60.00
			2020-21	80.60
		ಸ್ವಚ್ಛ ಭಾರತ ಮಿಷನ್	2018-19	18.33
			2019-20	02.04
			2020-21	06.30
2	ಕಣೇಗೌಡನಹಳ್ಳಿ	ಶಾಸನಬದ್ಧ ಅನುದಾನ	2020-21	9.63

ಸಂ. ಗ್ರಾಅಪ 63 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು